ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಆಂಗ್ಲ ಮಾಧ್ಯಮ ಶಾಲೆಗಳನ್ನು ಪ್ರಾರಂಭಿಸಲು ಬಂದ ಅರ್ಜಿಗಳು

೧೨೧. ಶ್ರೀ ವಿಜಯಕುಮಾರ ಶೆಟ್ಟಿ (ಸುರತ್ಕಲ್).— ಮಾನ್ಯ ಶಿಕ್ಷಣ, ಯುವಜನ ವ್ಯವಹಾರಗಳು, ಕ್ರೀಡೆಗಳು, ಕನ್ನಡ ಹಾಗೂ ಸಂಸ್ಕೃತಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಆಂಗ್ಲ ಮಾಧ್ಯಮದ ಶಾಲೆಗಳನ್ನು ಪ್ರಾರಂಭಿಸಲು ಸರ್ಕಾರಕ್ಕೆ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ?

ಆ) ಮಂಗಳೂರು ನಗರ ಹಾಗೂ ಪರಿಸರದಲ್ಲಿ ಸಾಕಷ್ಟು ಆಂಗ್ಲ ಮಾಧ್ಯಮ ಶಾಲೆಗಳು ಇಲ್ಲದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಆಂಗ್ಲಮಾಧ್ಯಮದ ಶಾಲೆಗಳನ್ನು ತೆರೆಯಲು ಶೀಘ್ರ ಅನುಮತಿ ಕೊಡಲು ಕ್ರಮ ಕೈಗೊಳ್ಳಲಾಗುವುದೇ ?

ಶ್ರೀ ಕೆ. ಎಚ್. ರಂಗನಾಥ್ (ಶಿಕ್ಷಣ ಮಂತ್ರಿಗಳು).—

ಅ) ಪ್ರಾಥಮಿಕ ಶಾಲೆಗಳು ೧೫೯
ಪ್ರೌಢ ಶಾಲೆಗಳು ೨

ಆ) ಮಂಗಳೂರು ಹಾಗೂ ಪರಿಸರದಲ್ಲಿ ಈಗಾಗಲೇ ಸಾಕಷ್ಟು ಆಂಗ್ಲ ಮಾಧ್ಯಮ ಶಾಲೆಗಳು ಇವೆ.

ಇ) ಹೆಚ್ಚುವರಿ ಶಾಲೆಗಳ ಅಗತ್ಯತೆಯನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

ಮಂಗಳೂರಿ ನಗರಾಭಿವೃದ್ಧಿ ಪ್ರಾಧಿಕಾರವು ಮಂಗಳೂರು ನಗರದ ನಿವೇಶನ ರಹಿತರ ಸಮೀಕ್ಷೆ

೧೨೪. **ಶ್ರೀ ವಿಜಯಕುಮಾರ್ ಶೆಟ್ಟಿ** (ಸುರತ್ಕಲ್).—ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಮಂಗಳೂರಿ ಅಭಿವೃದ್ಧಿ ಪ್ರಾಧಿಕಾರ ಮಂಗಳೂರು ನಗರದಲ್ಲಿ ನಿವೇಶನ ರಹಿತರ ಬಗ್ಗೆ ಸಮೀಕ್ಷೆ ನಡೆಸಿದೆಯೇ ?

ಆ) ಹಾಗಿದ್ದಲ್ಲಿ, ಈ ನಿವೇಶನ ರಹಿತರ ಸಂಖ್ಯೆ ಎಷ್ಟು ?

ಶ್ರೀ ಟಿ.ಎನ್. ನರಸಿಂಹಮೂರ್ತಿ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು).—

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಮಂಗಳೂರು ನಗರಾಭಿವೃದ್ಧಿ ಮಂಡಳಿ ಹಾಗೂ ಮಂಗಳೂರು ಅಭಿವೃದ್ಧಿ ಪ್ರಾಧಿಕಾರ ಸಾರ್ವಜನಿಕರಿಗೆ ಹಂಚಿದ ನಿವೇಶನಗಳ ಸಂಖ್ಯೆ

೧೨೪ ಅ ಶ್ರೀ ವಿಜಯಕುಮಾರ್ ಶೆಟ್ಟಿ (ಸುರತ್ಕಲ್).—ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರ ಹಾಗೂ ಮಂಡಳಿ ಸ್ಥಾಪನೆಗೊಂಡಾಗಿನಿಂದ ಈವರೆಗೆ ಸಾರ್ವಜನಿಕರಿಗೆ ಹಂಚಿದ ನಿವೇಶನಗಳ ಸಂಖ್ಯೆ ಎಷ್ಟು ?

ಆ) ನಿವೇಶನಗಳ ಅಭಿವೃದ್ಧಿಗಾಗಿ ಎಂ.ಡಿ.ಎ. ವಶಪಡಿಸಿಕೊಂಡಿರುವ ಭೂಮಿಯ ವಿಸ್ತೀರ್ಣ ಎಷ್ಟು ?